**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ತರೀಕೆರೆ.**

# ಕ್ರಿಮಿನಲ್ ಮೊಕದ್ದಮೆ ಸಂಖ್ಯೆ 10/2021

**ಪಿರ್ಯಾದಿ** ಃ ರಾಜ್ಯದ ಪರವಾಗಿ ಲಿಂಗದಹಳ್ಳಿ ಪೊಲೀಸರು

- ವಿರುದ್ಧ -

**ಆರೋಪಿ/ತರುಃ**

ಈಶ್ವರಪ್ಪ ಬಿನ್ ಲೇಟ್ ಗೋವಿಂದರೆಡ್ಡಿ, 50 ವರ್ಷ, ವಾಸ ಃ ಸುಣ್ಣದಹಳ್ಳಿ ಹುಲಿತಿಮ್ಮಾಪುರ ಗ್ರಾಮ, ಲಿಂಗದಹಳ್ಳಿ ಹೋಬಳಿ, ತರೀಕೆರೆ ತಾಲ್ಲೂಕು

****

**-ಃದೋಷಾರೋಪಣೆಃ-**

ಶ್ರೀ ಶಿವಕುಮಾರ್.ಆರ್., ಬಿ.ಎ.ಎಲ್., ಎಲ್.ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ ಆದ ನಾನು ಆರೋಪಿಯಾದ ನಿಮ್ಮ ವಿರುದ್ದ ಮಾಡುವ ದೋಷಾರೋಪಣೆ ಏನೆಂದರೆಃ-

ದಿನಾಂಕ 29.06.2020 ರಂದು ಬೆಳಿಗ್ಗೆ 11.00 ಗಂಟೆ ಸಮಯದಲ್ಲಿ ಲಿಂಗದಹಳ್ಳಿ ಪೊಲೀಸ್ ಠಾಣಾ ಸರಹದ್ದಿನ ಹುಲಿತಿಮ್ಮಾಪುರ ಗ್ರಾಮದ ಜಮೀನಿಗೆ ಆಲೂಗಡ್ಡೆ ಹಾಕಲು ಚಾಸಾ-1 ಶ್ರೀಮತಿ ರೇಣುಕಾರವರು ಚಾಸಾ-4 ರಿಂದ 7 ರವರೊಂದಿಗೆ ಹೋಗಿ ಟ್ರಾಕ್ಟರ್ ನಿಂದ ಬೇಸಾಯ ಮಾಡುತ್ತಿರುವಾಗ ಆರೋಪಿಯಾದ ನೀವು ಅಲ್ಲಿಗೆ ಬಂದು ಚಾಸಾ-1 ರವರಿಗೆ ಈ ಜಮೀನು ನನಗೆ ಸೇರಿದ್ದು ಯಾಕೆ ಬೇಸಾಯ ಮಾಡಿಸುತ್ತಿದ್ದೀರಿ ಎಂದು ಅವಾಚ್ಯ ಶಬ್ದಗಳಿಂದ ಬೈದು ಅವಮಾನ ಮಾಡಿದ್ದು, ಆದಕಾರಣ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ 504 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಎರಡನೇಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಚಾಸಾ-1 ರವರು ಯಾಕೆ ಬೈಯ್ಯುತ್ತಿದ್ದೀರಿ ಈ ಜಮೀನು ನಮಗೆ ಸೇರಿದ್ದು ಎಂದು ಕೇಳಿದ್ದಕ್ಕೆ ಆರೋಪಿಯಾದ ನೀವು ಚಾಸಾ-1 ರವರ ಕೈಹಿಡಿದು ಎಳೆದಾಡಿ ಚಾಸಾ-1 ರವರ ಮಾನಕ್ಕೆ ಧಕ್ಕೆಯನ್ನುಂಟು ಮಾಡಿದ್ದು, ಆದಕಾರಣ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ 354 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಮೂರನೇಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿಯಾದ ನೀವು ಜಮೀನಿನಲ್ಲಿದ್ದ ಕಲ್ಲಿನಿಂದ ಚಾಸಾ-1 ರವರ ಬಲಗಾಲಿನ ತೊಡೆಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯಗಳನ್ನುಂಟು ಮಾಡಿದ್ದು, ಆದಕಾರಣ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ 324 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ನಾಲ್ಕನೇಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿಯಾದ ನೀವು ಚಾಸಾ-1 ರವರನ್ನು ಕೈಗಳಿಂದ ತಳ್ಳಿ ಕೆಳಗೆ ಬೀಳಿಸಿ ಸಾಮಾನ್ಯ ಸ್ವರೂಪದ ಗಾಯಗಳನ್ನುಂಟು ಮಾಡಿದ್ದು, ಆದಕಾರಣ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ 323 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಕೊನೆಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿಯಾದ ನೀವು ಚಾಸಾ-1 ರವರಿಗೆ ನೀವು ಹೇಗೆ ಆಲೂಗಡ್ಡೆ ಹಾಕುತ್ತೀರಿ ನಾನು ನೋಡಿಕೊಳ್ಳುತ್ತೇನೆ ನಿಮ್ಮನ್ನು ಕೊಲೆ ಮಾಡದೇ ಬಿಡುವುದಿಲ್ಲವೆಂದು ಕೊಲೆ ಬೆದರಿಕೆ ಹಾಕಿದ್ದು, ಆದಕಾರಣ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ 506 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಆರೋಪಿಯಾದ ನೀವು ಸದರಿ ಆರೋಪಗಳ ಮೇಲೆ ಈ ನ್ಯಾಯಾಲಯದಿಂದ ವಿಚಾರಣೆಗೆ ಗುರಿಯಾಗತಕ್ಕುದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕ : 13.12.2022

**ಸಹಿ**

**(ಶಿವಕುಮಾರ್.ಆರ್.)**
**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ.**